# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 175
ಸದಸ್ಯರ ಹೆಸರು : ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16.07.2024
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| (ಅ) | ಬಳ್ಳಾರಿ ನಗರಸಭೆಯಲ್ಲಿ ಉತ್ಪತ್ತಿಯಾಗುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲಾಗುತ್ತಿದೆಯೇ; ಹಾಗಿದ್ದಲ್ಲಿ ಎಲ್ಲಿ ಹಾಗೂ ಎಷ್ಟು ಪ್ರಮಾಣದಲ್ಲಿ ಸಂಸ್ಕರಿಸಲಾಗುತ್ತಿದೆ; ನಗರ ಸಭೆಯ ಎಲ್ಲಾ ಕೊಳಚೆ ನೀರನ್ನು ಸಂಸ್ಕರಿಸಲಾಗುತ್ತಿದೆಯೇ; (ಮಾಹಿತಿ ಒದಗಿಸುವುದು). | ಬಳ್ಳಾರಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಕೊಳಚೆ ನೀರನ್ನು ಈ ಕೆಳಕಂಡಂತೆ ಸಂಸ್ಕರಣೆ ಮಾಡಲಾಗುತ್ತಿದೆ.<br>1) ಕೌಲ್ ಬಜಾರ್‌ನಲ್ಲಿರುವ 15 ಎಂ.ಎಲ್.ಡಿ ತ್ಯಾಜ್ಯ ನೀರು ಸಂಸ್ಕರಣಾ ಘಟಕದಲ್ಲಿ 10 ಎಂ.ಎಲ್.ಡಿ ತ್ಯಾಜ್ಯ ನೀರನ್ನು ಸಂಸ್ಕರಣೆ ಮಾಡಲಾಗುತ್ತಿದೆ.<br>2) ಅನಂತಪುರ ರಸ್ತೆಯಲ್ಲಿರುವ 30 ಎಂ.ಎಲ್.ಡಿ ತ್ಯಾಜ್ಯ ನೀರು ಸಂಸ್ಕರಣಾ ಘಟಕದಲ್ಲಿ 23 ಎಂ.ಎಲ್.ಡಿ ತ್ಯಾಜ್ಯ ನೀರು ಸಂಸ್ಕರಣೆ ಮಾಡಲಾಗುತ್ತಿದೆ.<br>3) ರಾಘವೇಂದ್ರ ಕಾಲೋನಿಯಲ್ಲಿರುವ 10 ಎಂ.ಎಲ್.ಡಿ ತ್ಯಾಜ್ಯ ನೀರು ಸಂಸ್ಕರಣಾ ಘಟಕದಲ್ಲಿ 10 ಎಂ.ಎಲ್.ಡಿ ತ್ಯಾಜ್ಯ ನೀರು ಸಂಸ್ಕರಣೆ ಮಾಡಲಾಗುತ್ತಿದೆ .<br>ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ, ಒಟ್ಟು 68 ಎಂ.ಎಲ್.ಡಿ ತ್ಯಾಜ್ಯ ನೀರು ಉತ್ಪತ್ತಿಯಾಗುತ್ತಿದ್ದು, ಅದರಲ್ಲಿ ಒಟ್ಟು 43 ಎಂ.ಎಲ್.ಡಿ ತ್ಯಾಜ್ಯ ನೀರನ್ನು ಸಂಸ್ಕರಿಸಲಾಗುತ್ತಿದೆ. |
| (ಆ) | ಸಂಸ್ಕರಣೆ ಮಾಡಿದ ನೀರನ್ನು ಎಲ್ಲಿಗೆ ಹರಿಸಲಾಗುತ್ತಿದೆ; ಈ ನೀರನ್ನು ಯಾವುದಕ್ಕೆ ಬಳಸಲಾಗುತ್ತಿದೆ; | ಸಂಸ್ಕರಣೆ ಮಾಡಿದ ನೀರನ್ನು ಹಳ್ಳಕ್ಕೆ ಹರಿಸಲಾಗುತ್ತದೆ. ಹಳ್ಳಕ್ಕೆ ಹರಿಸಲಾದ ನೀರನ್ನು ಕೃಷಿಗೆ ಬಳಸುತ್ತಿದ್ದಾರೆ ಹಾಗೂ ಮೆ\|\| ಜಾನಕಿ ಕಾರ್ಪ್ ಲೀ, ಶಿಡಿಗಿನಮೊಳ, ಬಳ್ಳಾರಿ (ತಾ) (ಜಿ) ಇವರಿಗೆ 02 ಎಂ.ಎಲ್.ಡಿ ತ್ಯಾಜ್ಯ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ಕೈಗಾರಿಕಾ ಉಪಯೋಗಕ್ಕೆ ಬಳಕೆಯಾಗುತ್ತಿದೆ. |
| (ಇ) | ಈ ಸಂಸ್ಕರಿಸಿದ ನೀರು ಕೈಗಾರಿಕೆಗಳಲ್ಲಿ ಬಳಸಲು ಯೋಗ್ಯವೇ; ಹಾಗಿದ್ದಲ್ಲಿ, ಈ ಸಂಸ್ಕರಿಸಿದ ನೀರನ್ನು ಜೀನ್ಸ್ ಉದ್ಯಮದ ಘಟಕಗಳಿಗೆ ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು). | ಸಂಸ್ಕರಿಸಿದ ನೀರು ಕೈಗಾರಿಕೆಗಳಲ್ಲಿ ಬಳಸಲು ಯೋಗ್ಯವಾಗಿರುತ್ತದೆ. ಜೀನ್ಸ್ ಉದ್ಯಮದವರು ಸಂಸ್ಕರಿಸಿದ ನೀರಿಗೆ ಬೇಡಿಕೆ ಸಲ್ಲಿಸಿದಲ್ಲಿ ನಿಯಮಾನುಸಾರ ನೀರನ್ನು ಒದಗಿಸಲು ಕ್ರಮ ವಹಿಸಲಾಗುವುದು. |

ನಅಇ 18 ಎಬಿಸಿ 2024(ಇ)

**(ಬಿ.ಎಸ್.ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ
ಸಚಿವರು.